ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಸತಿ ನಿಲಯದ ಕಟ್ಟಡ ಕುರಿತು

111 ಶ್ರೀ ಬಿದನೂರು.ಎಸ್ ವಿರೂಪಾಕ್ಷಪ್ಪ (ಗದಗ)
ಶ್ರೀ ಡಿ.ಸುಧಾಕರ್(ಸಮಾಜ ಕಲ್ಯಾಣ ಸಚಿವರು)

ಅ) ಗದಗ ನಗರದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಸತಿ ನಿಲಯಗಳ ಕಟ್ಟಡಗಳಿಗೆ ನಿವೇಶನಗಳನ್ನು ಗದಗ ನಗರಾಭಿವೃದ್ಧಿ ಪ್ರಾಧಿಕಾರದಿಂದ ಖರೀದಿಸಿದ್ದು, 2009–10ನೇ ಸಾಲಿನಲ್ಲಿ ಅಲ್ಲಿ ಕಟ್ಟಡವನ್ನು ಕಟ್ಟಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ ಯಾವಾಗ ಕಟ್ಟಡ ನಿರ್ಮಾಣದ ಕೆಲಸವನ್ನು ಪ್ರಾರಂಭಿಸಲಾಗುವುದು?

ಗದಗ ನಗರದಲ್ಲಿ ಪರಿಶಿಷ್ಟ ಜಾತಿಗೆ ಸಂಬಂಧಿಸಿದಂತೆ ಗದಗ ನಗರಾಭಿವೃದ್ಧಿ ಪ್ರಾಧಿಕಾರದಿಂದ ಒಂದು ನಿವೇಶನ ಪಡೆದಿದ್ದು, ಕಟ್ಟಡ ನಿರ್ಮಾಣ ಕಾರ್ಯ ಕ್ರಮ ಕೈಗೊಳ್ಳಲಾಗಿದೆ.

ಪರಿಶಿಷ್ಟ ವರ್ಗಕ್ಕೆ ಸಂಬಂಧಿಸಿದಂತೆ ಗದಗ ನಗರದಲ್ಲಿ ಯಾವುದೇ ವಿದ್ಯಾರ್ಥಿನಿಲಯಗಳು ಇಲ್ಲ.

ಹಿಂದುಳಿದ ವರ್ಗಗಳಿಗೆ ಸಂಬಂಧಿಸಿದಂತೆ ಮೂರು ವಿದ್ಯಾರ್ಥಿನಿಲಯಗಳಿಗೆ ಗದಗ ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿವೇಶನಗಳನ್ನು ಪಡೆಯಲಾಗಿದ್ದು, ಮುಂದಿನ ಆರ್ಥಿಕ ವರ್ಷಗಳಲ್ಲಿ ಆಯವ್ಯಯದ ಲಭ್ಯತೆಯನ್ವಯ ಕಟ್ಟಡ ನಿರ್ಮಾಣ ಕಾರ್ಯವನ್ನು ಪರಿಶೀಲಿಸಲಾಗುವುದು.
ಸಂ:ಸಕಇ 252 ಬಿಎಂಎಸ್ 2009

ಮೊರಾರ್ಜಿ ವಸತಿ ಶಾಲೆಗೆ ಜಮೀನು ಖರೀದಿಸಿದ್ದು, ಕಟ್ಟಡ ನಿರ್ಮಾಣ ಬಗ್ಗೆ.

112 ಶ್ರೀ ಬಿದರೂರು ಎಸ್ ವಿರೂಪಾಕ್ಷ(ಗದಗ)
ಪ್ರೊಡಾ. ಮುಮ್ತಾಜ್ ಅಲಿ ಖಾನ್(ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು)

ಅ) ಗದಗ ವಿಧಾನಸಭಾ ಕ್ಷೇತ್ರದಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ನಿವೇಶನ ಖರೀದಿಸಿರುವುದು ನಿಜವೇ; ಹಾಗಿದ್ದಲ್ಲಿ, ಸದರಿ ನಿವೇಶನದಲ್ಲಿ ಕಟ್ಟಡದ ನಿರ್ಮಾಣ ಕೆಲಸವನ್ನು ಪ್ರಾರಂಭಿಸುವುದು ಯಾವಾಗ?

ಹೌದು